# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ.ಹೆಚ್. ರಸ್ತೆ, ತುಮಕೂರು-572 103

ಸಂಖ್ಯೆ:ತುವಿ:ಶೈವಿ:PG-ADM:2019-20: 1994 ದಿನಾಂಕ:09.08.2019

## ಸುತ್ತೋಲೆ

ವಿಷಯ : 2019-20ನೇ ಶೈಕ್ಷಣಿಕ ಸಾಲಿನ ಪ್ರಥಮ ಹಾಗೂ ದ್ವಿತೀಯ ವರ್ಷದ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಾತಿ ಕುರಿತು.

ಉಲ್ಲೇಖ: 1. ವಿ.ವಿ ಅಧಿಸೂಚನೆ ಸಂಖ್ಯೆ ತುವಿ:ಶೈ.ವಿ:ಶೈ.ವೇ.ಪ:2019-20:398, ದಿನಾಂಕ.08.05.2019
2. ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ.08.08.2019

* * *

ಸೂಚಿತ ವಿಷಯಕ್ಕೆ ಸಂಬಂಧಿಸಿದಂತೆ, 2019-20ನೇ ಶೈಕ್ಷಣಿಕ ಸಾಲಿಗೆ ತುಮಕೂರು ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ ಕೋರ್ಸ್‌ಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಿ ಕೌನ್ಸಿಲಿಂಗ್ ಮುಖಾಂತರ ಪ್ರವೇಶಾತಿ ಪ್ರಕ್ರಿಯೆ ನಡೆಸಲಾಗಿತ್ತು. ಇದಕ್ಕೆ ಸಂಬಂಧಿಸಿದಂತೆ ಸಂಯೋಜಿತ ಕಾಲೇಜುಗಳಲ್ಲಿ ಭರ್ತಿಯಾಗದೇ ಖಾಲಿ ಉಳಿದ ಸೀಟುಗಳನ್ನು ದಿನಾಂಕ.16.08.2019ರೊಳಗೆ ವಿಶ್ವವಿದ್ಯಾನಿಲಯ ನಿಗದಿಪಡಿಸಿರುವ ಪ್ರವೇಶ ಶುಲ್ಕವನ್ನು ಪಾವತಿಸುವ ಮೂಲಕ ಭರ್ತಿ ಮಾಡಿಕೊಳ್ಳಲು ಸೂಚಿಸಿದೆ.

ಮುಂದುವರೆದು, ಪ್ರವೇಶಾತಿ ಪಡೆದ ಪ್ರಥಮ ಹಾಗೂ ದ್ವಿತೀಯ ವರ್ಷದ ವಿದ್ಯಾರ್ಥಿಗಳ ಪ್ರವೇಶಾತಿ ಪಟ್ಟಿಯನ್ನು ವಿಶ್ವವಿದ್ಯಾನಿಲಯ ನಿಗದಿಪಡಿಸಿರುವ ನಿಗದಿತ ನಮೂನೆಯಲ್ಲಿ (ಪ್ರಾಂಶುಪಾಲರಿಗೆ ಇ-ಮೇಲ್ ಮಾಡಲಾದ) ಭರ್ತಿಮಾಡಿ ಉಲ್ಲೇಖ(1)ರ ಅಧಿಸೂಚನೆಯಲ್ಲಿ ಈಗಾಗಲೇ ತಿಳಿಸಿರುವಂತೆ ದಿನಾಂಕ.09.09.2019ರೊಳಗೆ ವಿಶ್ವವಿದ್ಯಾನಿಲಯಕ್ಕೆ ದ್ವಿಪ್ರತಿಗಳಲ್ಲಿ ಹಾಗೂ ವಿಶ್ವವಿದ್ಯಾನಿಲಯಕ್ಕೆ ಪಾವತಿಸಬೇಕಾದ ಎಲ್ಲಾ ಶುಲ್ಕಗಳನ್ನು ಪಾವತಿಸಿ ರಸೀದಿಗಳನ್ನು ಕಡ್ಡಾಯವಾಗಿ ಸಲ್ಲಿಸಲು ಈ ಮೂಲಕ ತಿಳಿಸಲಾಗಿದೆ. ಹಾಗೆಯೇ ಪ್ರವೇಶ ಪಡೆದ ವಿದ್ಯಾರ್ಥಿಗಳ ಪ್ರವೇಶಾನುಮೋದನೆಯನ್ನು ತುರ್ತಾಗಿ ಪಡೆದುಕೊಳ್ಳಲು ಸೂಚಿಸಿದೆ. ತಪ್ಪಿದಲ್ಲಿ ಮುಂದಿನ ಆಗು ಹೋಗುಗಳಿಗೆ ತಾವೇ ಜವಾಬ್ದಾರಾಗಿರುತ್ತೀರಿ.

09/08

ಕುಲಸಚಿವರು

ಕುಲಸಚಿವರು
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಗೆ

ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಸಂಯೋಜಿತ ಸ್ನಾತಕೋತ್ತರ ಪದವಿ ಕಾಲೇಜುಗಳು, ತುಮಕೂರು

ಪ್ರತಿಗಳು:

1. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಕಚೇರಿ ಪ್ರತಿ.